**All India Radio: Bangalore**
**Regional Bulletin In Kannada**
**14.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.11.2025 / 6.40 p.m.**
***************

ಮುಖ್ಯಾಂಶಗಳು

೧. ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ನಿಧನ; ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಸಂಸ್ಕಾರ - ಮುಖ್ಯಮಂತ್ರಿ

೨. ಧಾರವಾಡದಲ್ಲಿ ೩೯ ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಹೊಸ ಎಕ್ಸ್‌ಲೆನ್ಸ್ ಕೇಂದ್ರ ಸ್ಥಾಪನೆ

೩. ತುಂಗಭದ್ರಾ ಜಲಾಯಶದ ಗೇಟ್ ಬದಲಾವಣೆವರೆಗೂ ನೀರು ಬಿಡದಿರಲು ಸರ್ಕಾರದ ನಿರ್ಧಾರ

೪. ಇಂದು ಮಕ್ಕಳ ದಿನಾಚರಣೆ; ಹಲವೆಡೆ ಜಾಗೃತಿ ಕಾರ್ಯಕ್ರಮ

****************

ವೃಕ್ಷಮಾತೆ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಸಾಲುಮರದ ತಿಮ್ಮಕ್ಕ ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ನರಳುತ್ತಿದ್ದ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿತ್ತು. ಆದರೆ ಉಸಿರಾಟ ತೊಂದರೆಯಿಂದಾಗಿ ಇಂದು ಕೊನೆಯುಸಿರೆಳೆದಿದ್ದಾರೆ.

ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನವರಾಗಿದ್ದ ತಿಮ್ಮಕ್ಕ, ಮಾಗಡಿ ತಾಲೂಕಿನ ಹುಲಿಕಲ್ ಗ್ರಾಮದ ಬಿಕ್ಕಲ ಚಿಕ್ಕಯ್ಯ ಅವರನ್ನು ವರಿಸಿದ ಬಳಿಕ ಹುಲಿಕಲ್‌ನ ರಾಜ್ಯ ಹೆದ್ದಾರಿ ೯೪ರಲ್ಲಿ ೩೮೫ ಆಲದ ಮರಗಳನ್ನು ಬೆಳೆಸಿದ್ದರು. ಪದ್ಮಶ್ರೀ, ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಸೇರಿದಂತೆ ಹಲವು ರಾಷ್ಟ್ರ ಹಾಗು ರಾಜ್ಯ ಪ್ರಶಸ್ತಿ, ಪುರಸ್ಕಾರಗಳಿಗೆ ಭಾಜನರಾಗಿದ್ದರು.

ತಿಮ್ಮಕ್ಕ ಅವರ ನಿಧನಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಸಚಿವರಾದ ವಿ. ಸೋಮಣ್ಣ, ಎಚ್.ಡಿ.ಕುಮಾರಸ್ವಾಮಿ ಹಾಗೂ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

ಸಾಲು ಮರದ ತಿಮ್ಮಕ್ಕ ಅವರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವದೊಂದಿಗೆ ನಡೆಸಲಾಗುವುದು. ತಿಮ್ಮಕ್ಕ ಅವರ ಅಂತ್ಯಕ್ರಿಯೆಯ ಬಗ್ಗೆ ಕುಟುಂಬದವರು ಎರಡು ಮೂರು ಸ್ಥಳಗಳನ್ನು ಗೊತ್ತು ಮಾಡಿದ್ದು, ಅಂತ್ಯಕ್ರಿಯೆ ಎಲ್ಲಿ ಮಾಡಬೇಕೆಂದು ಸದ್ಯದಲ್ಲಿಯೇ ನಿರ್ಧರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಈ ಮಧ್ಯೆ, ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ಹಳ್ಳೂರು ಗ್ರಾಮದಲ್ಲಿನ ತಿಮ್ಮಕ್ಕನವರ ದತ್ತುಪುತ್ರ ಉಮೇಶ್ ಅವರ ಮನೆಯಲ್ಲಿ ತನ್ನ ಕೊನೆಯ ದಿನಗಳನ್ನು ಕಳೆದ ಹಿನ್ನೆಲೆಯಲ್ಲಿ ಅವರ ಅಂತಿಮ ದರ್ಶನಕ್ಕಾಗಿ ಬೇಲೂರು ತಾಲೂಕು ಆಡಳಿತದಿಂದ ಸಾರ್ವಜನಿಕ ದರ್ಶನಕ್ಕಾಗಿ ಎಲ್ಲಾ ರೀತಿಯ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ಈ ಬಗ್ಗೆ ಮಾತನಾಡಿದ ತಹಶಿಲ್ದಾರ್ ಶ್ರೀಧರ್ ಕಂಕನವಾಡಿ, ವೃಕ್ಷಮಾತೆ ಸುಮಾರು ೧೦ ವರ್ಷಗಳಿಂದ ಬೇಲೂರಿನಲ್ಲಿ ನೆಲಸಿದ ಹಿನ್ನೆಲೆಯಲ್ಲಿ ತಾಲೂಕಿನ ಜನತೆ ಅವರ ಅಂತಿಮ ದರ್ಶನಕ್ಕಾಗಿ ಕಾಯುತ್ತಿದ್ದು ಜೂನಿಯರ್ ಕಾಲೇಜ್ ಮೈದಾನದಲ್ಲಿ ಎಲ್ಲಾ ರೀತಿಯ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯ ಐಟಿ-ಬಿಟಿ ಇಲಾಖೆ ವತಿಯಿಂದ ಧಾರವಾಡದ ಐಐಟಿ ಮತ್ತು ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯಲ್ಲಿ ೩೬ ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಹೊಸ ಎಕ್ಸಲೆನ್ಸ್ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಇವು ಉತ್ತರ ಕರ್ನಾಟಕ ಭಾಗದಲ್ಲಿ ಸಂಶೋಧನೆ ಮತ್ತು ನಾವಿನ್ಯತೆಯನ್ನು ಬಲಪಡಿಸಲಿವೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ರಕ್ಷಣಾ ತಂತ್ರಜ್ಞಾನ ಮತ್ತು ಕೈಗಾರಿಕೆ ೫.೦ ಅಡಿಯಲ್ಲಿ ನೂರಕ್ಕೂ ಹೆಚ್ಚು ಸ್ಟಾರ್ಟ್‌ಅಪ್ ಸ್ಥಾಪನೆಯಾಗಲಿವೆ ಎಂದವರು ಹೇಳಿದರು.

ಕ್ವಾಂಟಮ್ ಎಐ ಮತ್ತು ಕಂಪ್ಯೂಟಿಂಗ್ ಸಿಒಇ ಒಂದು ಸಾವಿರ ತಜ್ಞರನ್ನು ತರಬೇತುಗೊಳಿಸಲಿದ್ದು, ಅಭ್ಯರ್ಥಿಗಳ ಸಾಮರ್ಥ್ಯ ಅಭಿವೃದ್ಧಿ ಮತ್ತು ರಕ್ಷಣಾ ಅಭಿವೃದ್ಧಿಗೆ ನೆರವಾಗಲಿದ್ದು, ಭಾರತ ಕ್ವಾಂಟಮ್ ತಂತ್ರಜ್ಞಾನದಲ್ಲಿ ನಾಯಕತ್ವ ವಹಿಸಲು ಮತ್ತಷ್ಟು ಬಲ ನೀಡಲಿದೆ ಎಂದು ತಿಳಿಸಿದ್ದಾರೆ.

ಈ ಪ್ರಯತ್ನಗಳ ಮೂಲಕ ಬೆಂಗಳೂರಿನ ಹೊರಗಡೆ ಸ್ಥಳೀಯ ಪ್ರತಿಭೆ ಮತ್ತು ಸಂಸ್ಥೆಗಳನ್ನು ಪ್ರೋತ್ಸಾಹಿಸುವ ಮೂಲಕ ಆಧುನಿಕ ನಾವಿನ್ಯತೆ ಹೆಚ್ಚಿಸುವ ಗುರಿ ಹೊಂದಿರುವುದಾಗಿ ಸಚಿವರು ತಿಳಿಸಿದ್ದಾರೆ.

***************

ತುಂಗಭದ್ರಾ ಜಲಾಶಯದ ಗೇಟ್ ಬದಲಾಯಿಸುವವರೆಗೂ ಎರಡನೇ ಬೆಳೆಗೆ ನೀರು ಬಿಡಲು ಸಾಧ್ಯವಾಗುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಇಂದು ನಡೆದ ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಬರುವ ಜೂನ್ ಒಳಗಾಗಿ ಎಲ್ಲಾ ಗೇಟ್‌ಗಳನ್ನು ಬದಲಾಯಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗಿದ್ದು, ಈ ಬಾರಿ ಜಲಾಶಯದಲ್ಲಿರುವ ನೀರಿನ ಬಳಕೆಯ ನಿರ್ಧಾರವನ್ನು ತುಂಗಭದ್ರಾ ಮಂಡಳಿಗೆ ವಹಿಸಿದ್ದೇವೆ ಎಂದರು.

***************

ಪ್ರತಿ ಟನ್ ಕಬ್ಬಿಗೆ ೨ ಸಾವಿರದ ೯೦೦ ರೂಪಾಯಿ ದರ ನಿಗದಿಪಡಿಸುವುದಾಗಿ ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಕಬ್ಬು ದರ ನಿಗದಿ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಂದು ಜರುಗಿದ ಸಭೆಯಲ್ಲಿ ಮಾತನಾಡಿದ ಅವರು, ರೈತರಿಗು ಹಾಗೂ ಕಾರ್ಖಾನೆಯವರಿಗೂ ಅನ್ಯಾಯವಾಗದಂತೆ ೨ ಸಾವಿರದ ೯೦೦ ರೂಪಾಯಿ ದರ ನಿಗದಿಪಡಿಸುವುದಾಗಿ ಹೇಳಿದರು.

ರೈತರು ಹಾಗೂ ಕಾರ್ಖಾನೆಗಳು ಇಬ್ಬರೂ ಉಳಿಯಬೇಕು, ಈ ನಿಟ್ಟಿನಲ್ಲಿ ೨ ಸಾವಿರದ ೯೦೦ ರೂ. ದರ ನಿಗದಿಪಡಿಸಲಾಗುವುದು. ಇದರಿಂದ ಕಳೆದ ವರ್ಷಕ್ಕಿಂತ ೨೫೦ ರೂಪಾಯಿ ಹೆಚ್ಚಿನ ದರ ರೈತರಿಗೆ ಲಭಿಸಲಿದೆ ಎಂದರು.

***************

ನಾಡಿನಾದ್ಯಂತ ಇಂದು ಮಕ್ಕಳ ದಿನಾಚರಣೆಯನ್ನು ಆಚರಿಸುವ ಮೂಲಕ ಪೋಷಕರು ಹಾಗೂ ಶಿಕ್ಷಕರಲ್ಲಿ ಅವರ ಜವಾಬ್ದಾರಿ ಕುರಿತು ಅರಿವು ಮೂಡಿಸಲಾಯಿತು.

ಹುಬ್ಬಳ್ಳಿಯ ರಾಯನಾಳ ಗ್ರಾಮದ ಕೆಪಿಎಸ್ ಶಾಲೆಯಲ್ಲಿ ಜಿಲ್ಲಾಡಳಿತ, ಸಹಯೋಗದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಜಿಲ್ಲಾಮಟ್ಟದ ಪೋಷಕ ಶಿಕ್ಷಕರ ಮಹಾಸಭೆಯನ್ನು ಆಯೋಜಿಸಲಾಗಿತ್ತು. ಈ ಸಭೆ ಉದ್ಘಾಟಿಸಿದ ಜಿಲ್ಲಾಧಿಕಾರಿ ದಿವ್ಯ ಪ್ರಭು, ರಾಜ್ಯ ಸರಕಾರದ ಸೂಚನೆಯಂತೆ ವಿಶೇಷವಾಗಿ ಪೋಷಕರು, ಶಿಕ್ಷಕರಲ್ಲಿ ಅವರ ಜವಾಬ್ದಾರಿ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

(ಧ್ವನಿ- ಜಿಲ್ಲಾಧಿಕಾರಿ ದಿವ್ಯಪ್ರಭು)

ಗದಗದಲ್ಲಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿಗಳಾದ ಸಿ.ಎಸ್.ಶಿವನಗೌಡ್ರ, ಇಂದಿನ ಮಕ್ಕಳೇ ದೇಶದ ಭವಿಷ್ಯವಾಗಿದ್ದು, ಸಾಧನೆಯ ಹಾದಿಯಲ್ಲಿ ನಡೆಯಬೇಕು ಎಂದು ಕರೆ ನೀಡಿದರು.

****************

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವ ಮುಂದುವರಿಯುವ ಸಂದೇಶವನ್ನು ಬಿಹಾರದ ಜನತೆ ನೀಡಿದ್ದಾರೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹೇಳಿದ್ದಾರೆ.

ಕರ್ನಾಟಕ ಬಿಜೆಪಿ ಪರವಾಗಿ ಬಿಹಾರದ ಜನತೆಗೆ ಧನ್ಯವಾದ ಸಲ್ಲಿಸಿದ ಅವರು, ಮುಂಬರುವ ರಾಜ್ಯ ಚುನಾವಣೆಯಲ್ಲಿ ಕಾಂಗ್ರೆಸ್‌ನ ಸ್ಥಿತಿಯೂ ಮಹಾಘಟಬಂಧನ್‌ನಂತೆಯೇ ಆಗಲಿದೆ ಎಂದರು.

ಮತ್ತೊಂದೆಡೆ ಹಾವೇರಿಯಲ್ಲಿ ಮಾತನಾಡಿದ ಸಂಸದ ಬಸವರಾಜ ಬೊಮ್ಮಾಯಿ, ಬಿಹಾರ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಜನಪ್ರಿಯತೆ ಲೋಕಸಭಾ ಚುನಾವಣೆ ಬಳಿಕವೂ ದೃಡಪಟ್ಟಿದೆ ಎಂದು ಹೇಳಿದರು.

****************

ದೇಶದ ಮೊದಲ ಗೃಹ ಸಚಿವರಾಗಿದ್ದ ಸರ್ದಾರ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆ ಅಂಗವಾಗಿ ವಿಜಯಪುರದಲ್ಲಿ ಇಂದು ಆಯೋಜಿಸಿದ್ದ ರಾಷ್ಟ್ರೀಯ ಏಕತಾ ನಡೆಗೆ ಸಂಸದ ರಮೇಶ ಜಿಗಜಿಣಗಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಪಟೇಲರ ಸಾಧನೆಗಳು ನಮ್ಮೆಲ್ಲರಿಗೂ ಸ್ಪೂರ್ತಿಯಾಗಿವೆ. ಐಕ್ಯತೆ, ಸಮಗ್ರತೆ, ಆಂತರಿಕ ಭದ್ರತೆ ನಿಟ್ಟಿನಲ್ಲಿ ಒಗ್ಗೂಡಿಸಿ ಕಾರ್ಯ ನಿರ್ವಹಿಸಲು ಈ ಏಕತಾ ದಿನ ಆಚರಣೆ ಪ್ರೇರಣೆಯಾಗಿದೆ ಎಂದರು.

ಜಿಲ್ಲಾಧಿಕಾರಿ ಕೆ. ಆನಂದ ಮಾತನಾಡಿ, ಭಾರತದ ಉಕ್ಕಿನ ಮನುಷ್ಯ ಸರ್ದಾರ ವಲ್ಲಭಬಾಯಿ ಪಟೇಲ್ ಅವರು ವೈವಿಧ್ಯಮಯ ರಾಜ್ಯ ಪ್ರಭುತ್ವಗಳನ್ನು ಒಗ್ಗೂಡಿಸಿ ಆಧುನಿಕ ಭಾರತೀಯ ರಾಷ್ಟ್ರವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಸ್ಮರಿಸಿದರು.

ನಗರದ ವಿವಿಧ ಶಾಲೆಯ ವಿದ್ಯಾರ್ಥಿಗಳು ರಾಷ್ಟ್ರೀಯ ಧ್ವಜದೊಂದಿಗೆ ಏಕತಾನಡಿಗೆಯಲ್ಲಿ ಪಾಲ್ಗೊಂಡರು.

****************

ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ೧೫೦ನೇ ಜನ್ಮದಿನದ ಅಂಗವಾಗಿ ಹುಬ್ಬಳ್ಳಿಯಲ್ಲಿ ನಾಳೆ ಏಕತಾ ನಡಿಗೆ ಆಯೋಜಿಸಲಾಗಿದೆ ಎಂದು ಮೇಯರ್ ಜ್ಯೋತಿ ಪಾಟೀಲ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಈ ಕುರಿತು ವಿವರ ನೀಡಿದ ಅವರು, ನಾಳೆ ಬೆಳಗ್ಗೆ ೮ ಗಂಟೆಗೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ನೇತೃತ್ವದಲ್ಲಿ ನಡೆಯಲಿರುವ ನಡಿಗೆಯಲ್ಲಿ ನಗರದ ಶಾಲಾ, ಕಾಲೇಜುಗಳು ಸೇರಿದಂತೆ ೧ ಸಾವಿರದ ೫೦೦ ಕ್ಕೂ ಹೆಚ್ಚು ಜನರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು.

****************

ನೈರುತ್ಯ ರೈಲ್ವೆ ಪ್ರಧಾನ ವ್ಯವಸ್ಥಾಪಕರಾದ ಮುಕುಲ್ ಸರನ್ ಮಾಥುರ್ ಅವರಿಂದು ಸುಬ್ರಹ್ಮಣ್ಯ ರೋಡ್ ರೈಲು ನಿಲ್ದಾಣದಲ್ಲಿ ಪ್ರಗತಿಯಲ್ಲಿರುವ ಅಮೃತ್ ಭಾರತ್ ನಿಲ್ದಾಣ ಯೋಜನೆಯ ಕಾರ್ಯಗಳನ್ನು ಸಮಗ್ರವಾಗಿ ಪರಿಶೀಲಿಸಿದರು.

ನಿಲ್ದಾಣದಲ್ಲಿ ಸೌಲಭ್ಯಗಳು, ಅಭಿವೃದ್ಧಿ ಕಾರ್ಯಗಳು ಮತ್ತು ಸೇವಾ ಗುಣಮಟ್ಟ ಕುರಿತು ಪ್ರಯಾಣಿಕರೊಂದಿಗೆ ಸಂವಾದ ನಡೆಸಿದರು.

ಮೈಸೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ  ಮುದಿತ್ ಮಿತ್ತಲ್ ಹಾಗೂ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

****************

ವಾರಾಂತ್ಯದ ದಟ್ಟಣೆ ಹಾಗೂ ಸತ್ಯ ಸಾಯಿ ಪ್ರಶಾಂತಿ ನಿಲಯದಲ್ಲಿ ನಡೆಯಲಿರುವ ಸತ್ಯ ಸಾಯಿ ಬಾಬಾ ಅವರ ಜನ್ಮ ಶತಮಾನೋತ್ಸವ ಸಮಾರಂಭ ಹಿನ್ನೆಲೆಯಲ್ಲಿ ನೈರುತ್ಯ ರೈಲ್ವೆಯು ಬೆಂಗಳೂರು ಹಾಗೂ ತಿರುವನಂತಪುರಂ ನಾರ್ತ್ ನಡುವೆ ವಿಶೇಷ ಎಕ್ಸ್ ಪ್ರೆಸ್ ರೈಲುಗಳ ವ್ಯವಸ್ಥೆ ಮಾಡಿದೆ.

ಬೆಂಗಳೂರು ಕಂಟೋನ್ಮೆಂಟ್ -ತಿರುವನಂತಪುರಂ ನಾರ್ತ್ ಹಾಗೂ ಎಸ್ ಎಂವಿಟಿ ಬೆಂಗಳೂರು- ತಿರುವಂತಪುರಂ ನಾರ್ತ್ -ಎಸ್ ಎಂವಿಟಿ ಬೆಂಗಳೂರು ವಿಶೇಷ ಎಕ್ಸ್‌ಪ್ರೆಸ್ ರೈಲು ಕೆಆರ್ ಪುರಂ, ಬಂಗಾರಪೇಟೆ, ಸೇಲಂ ಮತ್ತಿತರ ನಿಲ್ದಾಣಗಳಲ್ಲಿ ನಿಲ್ಲಲಿವೆ ಎಂದು ನೈರುತ್ಯ ರೈಲ್ವೆ ಪ್ರಕಟಣೆ ತಿಳಿಸಿದೆ.

******** ಮುಕ್ತಾಯ ********